# ಕರ್ನಾಟಕ ವಿಧಾನ ಪರಿಷತ್ತು.

1. ಚುಕ್ಕೆ ಗುರುತಿಲ್ಲದ ಪ್ರಶ್ನೆ : 158
2. ಮಾನ್ಯ ಸದಸ್ಯರ ಹೆಸರು : ಶ್ರೀ ಕೆ.ಟಿ.ಶ್ರೀಕಂಠೇಗೌಡ
3. ಉತ್ತರಿಸುವ ದಿನಾಂಕ : 14.12.2021
4. ಉತ್ತರಿಸುವ ಸಚಿವರು : ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಮಂಡ್ಯದ ಮೈಷುಗರ್ ಸಕ್ಕರೆ ಕಾರ್ಖಾನೆಯು ಯಾವ ವರ್ಷದಿಂದ ಕಬ್ಬು ಅರೆಯುವುದನ್ನು ಸ್ಥಗಿಗೊಳಿಸಿದೆ; (ವಿವರ ನೀಡುವುದು) | ಮೈಸೂರು ಸಕ್ಕರ ಕಾರ್ಖಾನೆಯಲ್ಲಿ ಮೊದಲಿಗೆ 2015-16 ಮತ್ತು 2016-17ನೇ ಹಂಗಾಮಿನಿಂದ ಕಬ್ಬು ಅರೆಯುವ ಕಾರ್ಯವನ್ನು ಸ್ಥಗಿತಗೊಳಿಸಲಾಗಿತ್ತು. 2017-18 ಮತ್ತು 2018-19ನೇ ಹಂಗಾಮಿನಲ್ಲಿ ಕಬ್ಬು ಅರೆಯುವ ಕಾರ್ಯವನ್ನು ನಿರ್ವಹಿಸಲಾಗಿದೆ. ಮುಂದುವರಿದು, ದುಡಿಯುವ ಬಂಡವಾಳದ ಕೊರತೆಯಿಂದಾಗಿ 2019-20ನೇ ಹಂಗಾಮಿನಿಂದ ಕಬ್ಬು ಅರೆಯುವ ಕಾರ್ಯವನ್ನು ಸ್ಥಗಿತಗೊಳಿಸಲಾಗಿದೆ. |
| (ಆ) | ಇತ್ತೀಚೆಗೆ ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಮಂಡ್ಯ ಜಿಲ್ಲೆಯ ಜನ ಪ್ರತಿನಿಧಿಗಳು ಹಾಗೂ ರೈತ ಮುಖಂಡರ ಸಭೆಯ ಪ್ರಮುಖ ತೀರ್ಮಾನಗಳೇನು; | ದಿ ಮೈಷುಗರ್ ಕಂಪನಿ ಲಿಮಿಟೆಡ್ ಮಂಡ್ಯ – ಈ ಕಾರ್ಖಾನೆಯ ಪುನಶ್ಚೇತನಗೊಳಿಸುವ ಕುರಿತು ದಿನಾಂಕ: 18.10.2021ರಂದು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ ಈ ಕೆಳಕಂಡ ತೀರ್ಮಾನಗಳನ್ನು ಕೈಗೊಳ್ಳಲಾಗಿದೆ.<br>1. ಎಲ್.ಆರ್.ಓ.ಟಿ. ಆಧಾರದ ಮೇಲೆ ಮೈಸೂರು ಸಕ್ಕರೆ ಕಾರ್ಖಾನೆಯನ್ನು ಖಾಸಗಿಯವರಿಗೆ ಗುತ್ತಿಗೆ ನೀಡುವ ಸಂಬಂಧ ಈ ಹಿಂದೆ ಆಗಿರುವ ಸಚಿವ ಸಂಪುಟದ ನಿರ್ಣಯಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿ ಸರ್ಕಾರಿ ಸ್ವಾಮ್ಯದಲ್ಲಿ ನಡೆಸಲು ಅನುಕೂಲವಾಗುವಂತೆ ನುರಿತ ತಾಂತ್ರಿಕ ಸಮಿತಿಯಿಂದ ವರದಿಯನ್ನು ಪಡೆದು, ಉನ್ನತ ಅಧಿಕಾರಿ ಹಾಗೂ ತಾಂತ್ರಿಕ ಸಿಬ್ಬಂದಿ ಹಾಗೂ ನುರಿತ ಆರ್ಥಿಕ ಸಲಹೆಗಾರರನ್ನು ನೇಮಿಸಿ ಮುಂದಿನ ಸಚಿವ ಸಂಪುಟದ ನಿರ್ಣಯಕ್ಕೆ ತಂದು ಪ್ರಾರಂಭಿಸುವುದು.<br>2. ಕಾರ್ಖಾನೆಯ ಯಂತ್ರೋಪಕರಣಗಳನ್ನು ದುರಸ್ತೀಕರಣಗೊಳಿಸಲು ತುರ್ತು ಅಗತ್ಯವಿರುವ ಹಣವನ್ನು ಸರ್ಕಾರದಿಂದ ಬಿಡುಗಡೆಗೊಳಿಸುವುದು.<br>3. ಕಾರ್ಖಾನೆಯ ಆಸ್ತಿಯು ಬೆಲೆ ಬಾಳುವುದಾಗಿದ್ದು, ಇದರ ಆಧಾರದ ಮೇಲೆ ಬಂಡವಾಳ ಪಡೆದು ನಡೆಸಬಹುದೇ ಎಂಬ ಬಗ್ಗೆ ಪರಿಶೀಲಿಸುವುದು.<br>4. ಈ ಹಿಂದೆ ಆಗಿರುವ ಲೋಪದೋಷಗಳನ್ನು ಗುರುತಿಸಿ ಸರಿಪಡಿಸಿಕೊಂಡು 2 ವರ್ಷಗಳ ಅವಧಿಗೆ ಪ್ರಾಯೋಗಿಕವಾಗಿ ಸರ್ಕಾರಿ ಸ್ವಾಮ್ಯದಲ್ಲಿ ನಡೆಸುವ ಬಗ್ಗೆ 03 ತಿಂಗಳೊಳಗಾಗಿ ತಾಂತ್ರಿಕ ವರದಿಯನ್ನು ಪಡೆದು ಸಚಿವ ಸಂಪುಟದಲ್ಲಿ ಮಂಡಿಸಿ, ಕಾರ್ಖಾನೆಯನ್ನು ಪ್ರಾರಂಭ ಮಾಡಲು ತೀರ್ಮಾನಿಸುವುದು. |
| (ಇ) | ಈ ಸಭೆಯ ತೀರ್ಮಾನದಂತೆ ಕಾರ್ಖಾನೆಯನ್ನು ಸರ್ಕಾರಿ ಸೌಮ್ಯದಲ್ಲಿ ಆರಂಭಿಸುವ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ದಿ ಮೈಷುಗರ್ ಕಂಪನಿ ಲಿಮಿಟೆಡ್ ಮಂಡ್ಯ – ಈ ಕಾರ್ಖಾನೆಯ ಪುನಶ್ಚೇತನಗೊಳಿಸುವ ಕುರಿತು ದಿನಾಂಕ: 18.10.2021ರಂದು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ ಕೈಗೊಂಡ ನಿರ್ಣಯದನುಸಾರ ಈ ಕೆಳಕಂಡ ಕ್ರಮಗಳನ್ನು ಪ್ರಸ್ತುತ ಕೈಗೊಳ್ಳಲಾಗಿದೆ.<br>1. ಮೈಸೂರು ಸಕ್ಕರೆ ಕಾರ್ಖಾನೆಯನ್ನು ಪುನಶ್ಚೇತನಗೊಳಿಸುವ ಸಂಬಂಧ ಆಡಳಿತ, ಹಣಕಾಸು, ತಾಂತ್ರಿಕ ವರದಿಯನ್ನು ಪಡೆಯಲು ಮತ್ತು Operation and maintain (ಓ ಅಂಡ್ ಎಂ) ಆಧಾರದ ಮೇಲೆ ನೀಡಲು ಟೆಂಡರ್ ಡಾಕ್ಯುಮೆಂಟ್ ಅನ್ನು ಸಿದ್ದಪಡಿಸುವುದಕ್ಕಾಗಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಮತ್ತು ನಿಯಮಗಳು 2000ರಡಿಯಲ್ಲಿ 14 ದಿನಗಳ ಅಲ್ಪಾವಧಿ ಟೆಂಡರ್ |

| | | |
|---|---|---|
| | | ಕರೆದು ಕನ್ಸಲ್‌ಟೆನ್ಸಿ ಸೇವೆಯನ್ನು ಪಡೆಯಲು ಅಗತ್ಯ ಕ್ರಮವಹಿಸುವಂತೆ ಸರ್ಕಾರದ ಪತ್ರ ಸಂಖ್ಯೆ: ಸಿಐ 326 ಸಿಓಎಫ್ 2021, ದಿನಾಂಕ: 02.12.2021ರಲ್ಲಿ ಅನುಮತಿಯನ್ನು ನೀಡಲಾಗಿದೆ. ಟೆಂಡರ್ ಕರೆಯುವ ಕಾರ್ಯ ಪ್ರಗತಿಯಲ್ಲಿದೆ.<br><br>2. ದಿ ಮೈಸೂರು ಷುಗರ್ ಕಂಪನಿ ಲಿಮಿಟೆಡ್ ಮಂಡ್ಯ- ಈ ಕಾರ್ಖಾನೆಯನ್ನು ಸರ್ಕಾರಿ ಸ್ವಾಮ್ಯದಲ್ಲಿ ನಡೆಸಲು ಅನುಕೂಲವಾಗುವಂತೆ ವರದಿಯನ್ನು ಪಡೆಯುವ ಸಲುವಾಗಿ ಸರ್ಕಾರದ ಆದೇಶ ಸಂಖ್ಯೆ: ಸಿಐ 334 ಸಿಓಎಫ್ 2021, ದಿನಾಂಕ: 03.12.2021ರಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ತಾಂತ್ರಿಕ ಸಲಹಾ ಸಮಿತಿಯನ್ನು ರಚಿಸಿ ಆದೇಶಿಸಲಾಗಿದೆ. |

ಸಿಐ 345 ಸಿಓಎಫ್ 2021

(ಶಂಕರ ಬ. ಪಾಟೀಲ ಮುನೇನಕೊಪ್ಪ)
ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು.